ದಿನಾಂಕ 01-07-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದಃ</u>**

1) ಸರ್ಕಾರದವರು ನಮಗೆ ಸೇರಿದ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳುವ ಕಾಲಕ್ಕೆ ಸದರಿ ಜಮೀನಿನ ಖಾತೆ ನನ್ನ ಗಂಡನ ಹೆಸರಿನಲ್ಲಿ ಇತ್ತು. ನನ್ನ ಗಂಡ ಸರ್ಕಾರದಿಂದ ಯಾವ ಸಾಲಿನಲ್ಲಿ ಪರಿಹಾರ ಪಡೆದುಕೊಂಡಿರುತ್ತೇನೆ ಎಂದು ನನಗೆ ಗೊತ್ತಿರುವುದಿಲ್ಲ. ನನ್ನ ಗಂಡ ಹೆಚ್ಚಿನ ಪರಿಹಾರ ಕೋರಿ ಭೂ ಸ್ವಾಧೀನಾಧಿಕಾರಿಗಳಿಗೆ ಯಾವಾಗ ಅರ್ಜಿ ಸಲ್ಲಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಗಂಡ ಜೀವಂತ ಅವಧಿಯಲ್ಲಿ ಮಾನ್ಯ ಹುಣಸೂರು ಸಿವಿಲ್ ನ್ಯಾಯಾಲಯದಲ್ಲಿ ಹೆಚ್ಚಿನ ಪರಿಹಾರ ಕೋರಿ ಕಡತವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ಅರ್ಜಿ ಸಲ್ಲಿಸಿದ್ದರು ಎಂದರೆ ನನಗೆ ಗೊತ್ತಿಲ್ಲ. ಸದರಿ ಪ್ರಕರಣ ಸಂಖ್ಯೆ ಎಲ್ ಎ ಸಿ 42/2005 ಆಗಿತ್ತು ಎಂದರೆ ನನಗೆ ಗೊತ್ತಿಲ್ಲ. ಸದರಿ ಅರ್ಜಿ ನನ್ನ ಗಂಡ ಹಾಜರಾಗದ ಕಾರಣ ಭೂ ಸ್ವಾಧೀನಾಧಿಕಾರಿಗಳು ಮಾಡಿರುವ ಆದೇಶವನ್ನು ಎತ್ತಿಡಲಾಗಿದೆ ಎಂದರೆ ನನಗೆ ಗೊತ್ತಿಲ್ಲ.

2) ನನ್ನ ಗಂಡ ಸಲ್ಲಿಸಿದ ಅರ್ಜಿಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಪ್ರಸ್ತುತ ಅರ್ಜಿಯನ್ನು ಸಲ್ಲಿಸಲು ಕಾಲ ವಿಳಂಬವಾಗಿದೆ ಎಂದು ತೋರಿಸಲು ದಾಖಲೆ ಹಾಜರುಪಡಿಸಿರುವುದಿಲ್ಲ. ನಾನು ಸುಳ್ಳು ಅರ್ಜಿ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು

ಮತ್ತು ಪ್ರದನ್ಯಾದಂ., ಕೆ.ಆರ್.ನಗರ.